ಇ) ಹೊಸ ಸೇತುವೆ ನಿರ್ಮಾಣದ ಅಂದಾಜು ಪಟ್ಟಿ 4.60 ಲಕ್ಷ ರೂ.ಗಳಿಗೆ ಈಗಾಗಲೇ ಅನುಮೋದನೆ ನೀಡಲಾಗಿದೆ. ಟೆಂಡರ್ ಕರೆದು ಕೆಲಸವನ್ನು ಶೀಘ್ರದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ವಿಷಯ: 1998-99ನೇ ಸಾಲಿನ ಸರ್ಕಾರಿ ನೌಕರರ ವರ್ಗಾವಣೆ ಮಾರ್ಗಸೂಚಿ

873 (1414)

ಶ್ರೀ ಕೆ.ಜಯರಾಮ ಶೆಟ್ಟಿ (ಉಳ್ಳಾಲ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99ನೇ ಸಾಲಿನಲ್ಲಿ ಜಾರಿಗೆ ಬರುವಂತೆ ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ವರ್ಗಾವಣೆ ಮಾರ್ಗ ಸೂಚನೆಗಳನ್ನು ಸರ್ಕಾರ ಜಾರಿಗೆ ತಂದಿದೆಯೆ?

ಆ) ಹಾಗಿದ್ದಲ್ಲಿ, ಈ ವರ್ಗಾವಣೆಗಳನ್ನು ಯಾವ ತಿಂಗಳಿಂದ ಜಾರಿಗೆ ತರುವುದು ಮತ್ತು ಯಾವಾಗ ಪೂರೈಸಲಾಗುವುದು?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯಮಂತ್ರಿಗಳು):

ಅ) ಹೌದು.

ಆ) ದಿನಾಂಕ 3-4-1998ರ ಅಧಿಕೃತ ಜ್ಞಾಪನದಲ್ಲಿ ಸೂಚಿಸಿದಂತೆ ವರ್ಗಾವಣೆಗಳನ್ನು ಏಪ್ರಿಲ್-ಮೇ ತಿಂಗಳ ಒಳಗಾಗಿ ಪೂರೈಸಬೇಕಾಗಿದೆ.

ವಿಷಯ: ರಾಜ್ಯದಲ್ಲಿರುವ ಪ್ರದೇಶಾಭಿವೃದ್ಧಿ ಮಂಡಳಿಗಳು,

874 (1483)

ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ): ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪ್ರದೇಶಾಭಿವೃದ್ಧಿ ಮಂಡಳಿಗಳು ಯಾವುವು? ಇವುಗಳು ಯಾವಾಗ ಪ್ರಾರಂಭವಾದವು?

ಆ) ಈ ಮಂಡಳಿ ವ್ಯಾಪ್ತಿಯಲ್ಲಿ ಬರುವ ವಿಧಾನಸಭಾ ಕ್ಷೇತ್ರಗಳ ಸಂಖ್ಯೆ ಎಷ್ಟು? ಹಾಗೂ ಅವುಗಳು ಯಾವುವು?

ಇ) ರಾಜ್ಯ ಸರ್ಕಾರದವರು ಕಳೆದ 4 ವರ್ಷಗಳಲ್ಲಿ ಈ ಮಂಡಳಿಗೆ ಒದಗಿಸಿದ ಅನುದಾನದ ಮೊತ್ತವೆಷ್ಟು? (ಪ್ರತ್ಯೇಕ ವಿವರ ನೀಡುವುದು).